**All India Radio: Bangalore**
**Regional Bulletin In Kannada**
**05.11.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.11.2025 / 2.30 p.m.**

**<><><><>**

ಮುಖ್ಯಾಂಶಗಳು

1. ಪ್ರತಿಟನ್ ಕಬ್ಬಿಗೆ ೩ ಸಾವಿರದ ೫೦೦ ರೂಪಾಯಿ ನೀಡುವಂತೆ ಆಗ್ರಹ ; ಬೆಳಗಾವಿಯಲ್ಲಿ ೭ನೇ ದಿನಕ್ಕೆ ಕಾಲಿಟ್ಟ ರೈತರ ಪ್ರತಿಭಟನೆ
2. ಸೌಹಾರ್ದಯುತವಾಗಿ ಸಮಸ್ಯೆ ಬಗೆಹರಿಸುವಂತೆ ಕಬ್ಬು ಬೆಳೆಗಾರರಿಗೆ ಸರ್ಕಾರ ಮನವಿ ; ಬೇಡಿಕೆ ಈಡೇರಿಸುವಂತೆ ಬಿಜೆಪಿ ಒತ್ತಾಯ
3. ಮೈಸೂರಿನಲ್ಲಿ ಮೇಲ್ಸೇತುವೆ ನಿರ್ಮಾಣ ಮಾಡಿದರೆ ಕಾನೂನಾತ್ಮಕ ಹೋರಾಟ ; ಸರ್ಕಾರಕ್ಕೆ ಸಂಸದ ಯದುವೀರ್ ಒಡೆಯರ್ ಎಚ್ಚರಿಕೆ
4. ಇದೇ ೯ ರಂದು ಮೇಲುಕೋಟೆಗೆ ಉಪರಾಷ್ಟ್ರಪತಿ ಭೇಟಿ ; ಸಿದ್ಧತೆ ಪರಿಶೀಲಿಸಿದ ಮಂಡ್ಯ ಜಿಲ್ಲಾಧಿಕಾರಿ

<><><><>

ಪ್ರತಿ ಟನ್ ಕಬ್ಬಿಗೆ ಸಕ್ಕರೆ ಕಾರ್ಖಾನೆಗಳು ೩ ಸಾವಿರದ ೫೦೦ ರೂಪಾಯಿ ನೀಡಲೇಬೇಕು ಎಂದು ಆಗ್ರಹಿಸಿ ಬೆಳಗಾವಿ ಜಿಲ್ಲೆಯಲ್ಲಿ ರೈತರು ನಡೆಸುತ್ತಿರುವ ಪ್ರತಿಭಟನೆ ಏಳನೇ ದಿನವಾದ ಇಂದೂ ಮುಂದುವರೆದಿದೆ. ಮೂಡಲಗಿ ಸಮೀಪದ ಗುರ್ಲಾಪುರ ಹೆದ್ದಾರಿಯ ಮೇಲೆ ಕಳೆದ ಏಳು ದಿನಗಳಿಂದ ನಡೆಸುತ್ತಿರುವ ಪ್ರತಿಭಟನೆಯಲ್ಲಿ ಸಾವಿರಾರು ರೈತರು ಪಾಲ್ಗೊಂಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಬಲ ವ್ಯಕ್ತಪಡಿಸಿ ಕಳೆದ ರಾತ್ರಿಯಿಡಿ ರೈತರೊಂದಿಗೆ ಹೆದ್ದಾರಿಯಲ್ಲಿಯೇ ಉಳಿದುಕೊಂಡು ರೈತರ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿ.ವೈ. ವಿಜಯೇಂದ್ರ, ಸರ್ಕಾರ ರೈತರ ಬೇಡಿಕೆಗೆ ಈಗಾಗಲೇ ಸ್ಪಂದಿಸಬೇಕಾಗಿತ್ತು, ಆದರೆ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದು, ಕೂಡಲೇ ರೈತರ ಸಮಸ್ಯೆಗೆ ಸ್ಪಂದಿಸುವಂತೆ ಒತ್ತಾಯಿಸಿದ್ದಾರೆ.

ಧ್ವನಿ : ಬಿ.ವೈ. ವಿಜಯೇಂದ್ರ

ಈ ಮಧ್ಯೆ ಇಂದು ರೈತರ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ ರಾಯಬಾಗ ಬಂದ್‌ಗೆ ಕರೆ ನೀಡಲಾಗಿದೆ. ಬಂದ್‌ಗೆ ಪೂರ್ಣ ಪ್ರಮಾಣದ ಬೆಂಬಲ ವ್ಯಕ್ತವಾಗಿದ್ದು ವ್ಯಾಪಾರಸ್ಥರು ಅಂಗಡಿ ಮುಂಗಟ್ಟುಗಳನ್ನು ಬೆಳಗ್ಗೆಯಿಂದಲೇ ಬಂದ್ ಮಾಡಿದ್ದಾರೆ. ಸಾರಿಗೆ ವ್ಯವಸ್ಥೆಯನ್ನೂ ಸ್ಥಗಿತಗೊಳಿಸಲಾಗಿದೆ.

<><><><>

ಕಬ್ಬಿನ ದರ ನಿಗದಿ ಮಾಡುವುದು ಕೇಂದ್ರ ಸರ್ಕಾರದ ನಿರ್ಣಯವಾಗಿದೆ ಎಂದು ಸಕ್ಕರೆ, ಕಬ್ಬು ಅಭಿವೃದ್ಧಿ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಸ್ಪಷ್ಟಪಡಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಲೆ ನೀಡುವಲ್ಲಿ ಸಕ್ಕರೆ ಕಾರ್ಖಾನೆ ಹಾಗೂ ರೈತರ ಸಮನ್ವಯ ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ರೈತರು ಸೌಹಾರ್ದಯುತವಾಗಿ ಸಮಸ್ಯೆಯನ್ನು ಪರಿಹರಿಸಿಕೊಂಡು ಕಬ್ಬು ನುರಿಸಲು ಅವಕಾಶ

ನೀಡಬೇಕು ಎಂದು ಮನವಿ ಮಾಡಿದ್ದಾರೆ. ರೈತರಿಗೆ ಸರ್ಕಾರ ವಿದ್ಯುತ್, ನೀರು, ಶೂನ್ಯ ಬಡ್ಡಿ ದರದಲ್ಲಿ ಸಾಲ ಸೇರಿದಂತೆ ಅನೇಕ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಯಾವುದೇ ರೀತಿಯಲ್ಲಿ ಅನ್ಯಾಯವಾಗದಂತೆ ನಡೆದುಕೊಳ್ಳುತ್ತಿದೆ. ಹೀಗಾಗಿ ರೈತರು ಸಮಸ್ಯೆಗೆ ಸೌಹಾರ್ದಯುತವಾಗಿ ಪರಿಹಾರದ ಜೊತೆಗೆ ಕಬ್ಬು ನುರಿಸಲು ಅವಕಾಶ ನೀಡಬೇಕು ಎಂದು ತಿಳಿಸಿದ್ದಾರೆ. ಸಮಯ ಮೀರಿದರೆ ಕಬ್ಬಿನ ಸಕ್ಕರೆ ಅಂಶ ಕಡಿಮೆಯಾಗಿ ರೈತರಿಗೆ ತೊಂದರೆಯಾಗಲಿದೆ ಎಂದು ಹೇಳಿದ್ದಾರೆ. ಅಡುಗೆ ಅನಿಲ ಮಾದರಿಯಲ್ಲಿಯೇ ಸಕ್ಕರೆ ದರ ಪರಿಷ್ಕರಣೆಯಾಗಬೇಕು. ಕೇಂದ್ರ ಸರ್ಕಾರ ವಾಣಿಜ್ಯ ಹಾಗೂ ಗೃಹ ಬಳಕೆ ಮಾದರಿಯಲ್ಲಿ ಬೆಲೆಯನ್ನು ಪ್ರತ್ಯೇಕವಾಗಿ ನಿಗದಿ ಮಾಡಬೇಕು ಎಂದು ತಿಳಿಸಿದ್ದಾರೆ.

<><><>

ಮೈಸೂರಿನಲ್ಲಿ ಜನರ ವಿರೋಧದ ನಡುವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಂಡರೆ ಕಾನೂನಾತ್ಮಕ ಹೋರಾಟ ನಡೆಸಲಾಗುವುದು ಎಂದು ರಾಜ್ಯ ಸರ್ಕಾರಕ್ಕೆ ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಎಚ್ಚರಿಕೆ ನೀಡಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು ನಗರದೊಳಗೆ ಎರಡು ಫ್ಲೈ ಓವರ್ ನಿರ್ಮಾಣ ಮಾಡಲು ಸರ್ಕಾರ ಮುಂದಾಗಿದ್ದು, ಅದಕ್ಕಾಗಿ ಮಣ್ಣಿನ ಪರೀಕ್ಷೆಯನ್ನು ನಡೆಸಿದೆ. ಜೆಎಲ್‌ಬಿ ರಸ್ತೆ, ವಿನೋಬ ರಸ್ತೆಗಳು ಪಾರಂಪರಿಕ ರಸ್ತೆಗಳಾಗಿದ್ದು, ಈ ರಸ್ತೆಗಳನ್ನು ಹಾಗೆಯೇ ಉಳಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಜನಾಭಿಪ್ರಾಯ ಪಡೆಯದೇ ಈ ಮಾರ್ಗದಲ್ಲಿ ಮೇಲ್ಸೇತುವೆ ನಿರ್ಮಾಣ ಕಾರ್ಯಕ್ಕೆ ಸರ್ಕಾರ ಮುಂದಾಗಿದೆ ಎಂದರು ಆರೋಪಿಸಿದ್ದಾರೆ. ವಿನೋಬ ರಸ್ತೆಯಲ್ಲಿ ಮೇಲ್ಸೇತುವೆ ನಿರ್ಮಿಸಲು ಮುಂದಾದರೆ ಮರಗಳ ನಾಶವಾಗಲಿದೆ. ಅಭಿವೃದ್ಧಿ ನೆಪದಲ್ಲಿ ಮೈಸೂರಿನ ಸೌಂದರ್ಯ ಹಾಳು ಮಾಡಬಾರದು. ಪಾರಂಪರಿಕ ನಗರಿಯ ಗುರುತು ಉಳಿಸಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

**ಧ್ವನಿ : ಯದುವೀರ್**

ಗ್ರೇಟರ್ ಮೈಸೂರಿನಿಂದ ಜನರಿಗೆ ಒಳಿತಾಗಲಿದೆ. ಆದರೆ ಗ್ರೇಟರ್ ಮೈಸೂರು ನಿರ್ಮಾಣ ಮಾಡುವಾಗ ಪೂರ್ವ ತಯಾರಿ ಮಾಡಿಕೊಳ್ಳಬೇಕು. ಬೆಂಗಳೂರು ಮಾದರಿಯಲ್ಲಿ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಬಾರದು ಎಂದು ಸಲಹೆ ನೀಡಿದ್ದಾರೆ.

<><><>

ಮಂಡ್ಯ ಜಿಲ್ಲೆಯ ಐತಿಹಾಸಿಕ ಧಾರ್ಮಿಕ ಕ್ಷೇತ್ರ ಮೇಲುಕೋಟೆಗೆ ಇದೇ ೯ರಂದು ಉಪ ರಾಷ್ಟ್ರಪತಿ ರಾಧಾಕೃಷ್ಣನ್ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮೇಲುಕೋಟೆ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಯಾವುದೇ ಲೋಪಕ್ಕೆ ಅವಕಾಶ ನೀಡದಂತೆ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಲು ಸೂಚಿಸಿದ್ದಾರೆ. ಮಾರ್ಗಸೂಚಿಯಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ನಿರಂತರವಾಗಿ ವಿದ್ಯುತ್ ಸಂಪರ್ಕ, ಇಂಟರ್ ನೆಟ್ ಸಂಪರ್ಕ ಇರುವಂತೆ ನೋಡಿಕೊಳ್ಳಬೇಕು. ರಸ್ತೆಗಳ ಅಕ್ಕಪಕ್ಕದಲ್ಲಿ ಸ್ವಚ್ಚತೆಗೆ ಕ್ರಮವಹಿಸಬೇಕು ಸುಸಜ್ಜಿತ ಅಂಬುಲೆನ್ಸ್ ನೊಂದಿಗೆ ನುರಿತ ಆರೋಗ್ಯ ಸಿಬ್ಬಂದಿಯನ್ನು ನೇಮಿಸುವಂತೆ ನಿರ್ದೇಶನ ನೀಡಿದ್ದಾರೆ. ಸಭೆಗೂ ಮುನ್ನ ಜಿಲ್ಲಾಧಿಕಾರಿ ಡಾ ಕುಮಾರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಕಾರ್ಯಕ್ರಮ ನಡೆಯುವ ಸ್ಥಳ ಹಾಗೂ ಹೆಲಿಪ್ಯಾಡ್‌ಗೆ ಭೇಟಿ ನೀಡಿ ಪರಿಶೀಲಿಸಿ ಅಧಿಕಾರಿಗಳಿಗೆ ಸಲಹೆ

ಸೂಚನೆಗಳನ್ನು ನೀಡಿದರು. ಉಪರಾಷ್ಟ್ರಪತಿ ಭೇಟಿ ಹಿನ್ನೆಲೆಯಲ್ಲಿ ಇದೇ ೯ರಂದು ಸಾರ್ವಜನಿಕರಿಗೆ ಮೇಲುಕೋಟೆ ದೇವಾಲಯ ಪ್ರವೇಶ ಇರುವುದಿಲ್ಲ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಇಂದು ಮಂಡ್ಯದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರೇ ಆತ್ಮಹತ್ಯೆಗೆ ಯತ್ನಿಸಿದ್ದ ಕೆ.ಆರ್.ಪೇಟೆ ತಾಲೂಕು ಮೂಡನಹಳ್ಳಿ ಗ್ರಾಮದ ಮಂಜೇಗೌಡ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮಂಜೇಗೌಡ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದರು. ಮೃತ ರೈತನ ಕುಟುಂಬಸ್ಥರಿಗೆ ೫ ಲಕ್ಷ ಪರಿಹಾರ ನೀಡುವುದಾಗಿ ಸಚಿವರು ಇದೇ ಸಂದರ್ಭದಲ್ಲಿ ಘೋಷಿಸಿದರು.

<><><><>

ಕೋಲಾರ ಜಿಲ್ಲೆಯ ಮಾಲೂರು ವಿಧಾನಸಭಾ ಕ್ಷೇತ್ರದ ಚುನಾವಣೆಯ ಮರು ಮತ ಎಣಿಕೆ ಇದೇ ೧೧ರಂದು ನಡೆಸುವಂತೆ ರಾಜ್ಯ ಚುನಾವಣಾ ಆಯೋಗ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಿದೆ. ನ್ಯಾಯಾಲಯದ ಆದೇಶದಂತೆ ಮರು ಮತ ಎಣಿಕೆ ನಡೆಸಬೇಕು ಎಂದು ರಾಜ್ಯ ಚುನಾವಣಾ ಸಹಾಯಕ ಮುಖ್ಯ ಚುನಾವಣಾಧಿಕಾರಿ ಆರ್.ವಿ.ರುವನ್ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅವರಿಗೆ ಪತ್ರ ಬರೆದಿದ್ದಾರೆ. ಈ ಸಂಬಂಧ ಈಗಾಗಲೇ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ಅಪರ ಜಿಲ್ಲಾಧಿಕಾರಿ ಮಂಗಳಾ, ಸೇರಿದಂತೆ ಹಲವು ಅಧಿಕಾರಿಗಳು ತೋಟಗಾರಿಕಾ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಸ್ಥಳ ವೀಕ್ಷಣೆ ನಡೆಸಿದ್ದಾರೆ. ೨೦೨೩ರಲ್ಲಿ ನಡೆದ ಮಾಲೂರು ವಿಧಾನಸಭಾ ಚುನಾವಣೆಯು ತೀವ್ರ ಜಿದ್ದಾ-ಜಿದ್ದಿನಿಂದ ಕೂಡಿತ್ತು. ಮತ ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಕೆ.ಎಸ್.ಮಂಜುನಾಥ್ ಗೌಡ ೫೦ ಸಾವಿರದ ೭೦೭ ಮತ ಹಾಗೂ ಶಾಸಕ ಕೆ.ವೈ.ನಂಜೇಗೌಡ ೫೦ ಸಾವಿರದ ೯೫೫ ಮತ ಪಡೆದು ೨೪೮ ಮತಗಳ ಅಂತರದಿಂದ ಜಯಗಳಿಸಿದ್ದರು.

<><><><>

ತುಂಗಭದ್ರಾ ಮತ್ತು ವರದಾ ನದಿಗಳ ಮಾಲಿನ್ಯಕ್ಕೆ ಕಾರಣರಾಗುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಎಚ್ಚರಿಕೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು ೫೦ ವರ್ಷ ತುಂಬಿದ ಹಿನ್ನೆಲೆಯಲ್ಲಿ ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಉತ್ಪತ್ತಿಯಾಗುವ ಕಲ್ಮಶಗಳು ನದಿಗಳ ಮಾಲಿನ್ಯಕ್ಕೆ ಕಾರಣವಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>